ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ನಗರ ಕೇಂದ್ರ ಗ್ರಂಥಾಲಯಗಳ ದುರಸ್ತಿ ಬಗ್ಗೆ

ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು):-

523 (493) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿರುವ ವಿಜಯಪುರ ನಗರ ಕೇಂದ್ರ ಗ್ರಂಥಾಲಯವು ಶಿಥಿಲಾವಾಸ್ಥೆಯಲ್ಲಿರುವುದು ಮತ್ತು ಸಿಬ್ಬಂದಿಗಳ ಕೊರತೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದರ ದುರಸ್ತಿ ಮತ್ತು ಸಿಬ್ಬಂದಿಗಳ ನೇಮಕ ಯಾವಾಗ ಮಾಡಲಾಗುವುದು ;

(ಇ) ವಿಜಯಪುರ ಜಿಲ್ಲೆಯಾದ್ಯಂತ ಇರುವ ನಗರ ಕೇಂದ್ರ ಗ್ರಂಥಾಲಯಗಳ ಸಂಖ್ಯೆ ಎಷ್ಟು ;

(ಈ) ಇವುಗಳಲ್ಲಿ ಸ್ವಂತ ಕಟ್ಟಡವನ್ನು ಹೊಂದಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)